**2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಕನಕಪುರ, ಬೆಂಗಳೂರು ದಕ್ಷಿಣ ಜಿಲ್ಲೆ.**

<u>ಎಸ್.ಸಿ.5033/2024</u>

ದಿಃ12.12.2025
ಚಾಸಾ-5 ಪ್ರಾಸಾ-3

| | |
|---|---|
| ಹೆಸರು | : ದಿನೇಶ್ |
| ತಂದೆಯ ಹೆಸರು | : ಲೇಟ್ ಎ.ಎಂ.ಶಿವಣ್ಣ |
| ವಯಸ್ಸು | : 49 ವರ್ಷ |
| ಉದ್ಯೋಗ | : ವಲಯ ಅರಣ್ಯಾಧಿಕಾರಿಗಳು, ಸಾಮಾಜಿಕ ಅರಣ್ಯ ವಿಭಾಗ, ಕನಕಪುರ |
| ವಾಸ | : ಕನಕಪುರ |

**(ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು)**
**<u>ಮುಖ್ಯವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ</u>**

ನಾನು 2017 ರಿಂದ ಇಲ್ಲಿಯವರೆಗೂ ಸಾಮಾಜಿಕ ಅರಣ್ಯ ವಿಭಾಗ, ಕನಕಪುರದಲ್ಲಿ ವಲಯ ಅರಣ್ಯಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಿಕೊಂಡು ಬಂದಿರುತ್ತೇನೆ.

ದಿಃ13.10.2018ರಂದು ಚಾಸಾ-1ರವರಿಂದ ಈ ಪ್ರಕರಣದ ಕಡತವನ್ನು ಪಡೆದುಕೊಂಡು ಪರಿಶೀಲಿಸಿ, ನಂತರ 1 ಮತ್ತು 2ನೇ ಆರೋಪಿತರ ಸ್ವಇಚ್ಛಾ ಹೇಳಿಕೆಗಳನ್ನು ದಾಖಲು ಮಾಡಿಕೊಂಡಿರುತ್ತೇನೆ. ಸಾಕ್ಷಿಯು 1 ಮತ್ತು 2ನೇ ಆರೋಪಿತರ ಸ್ವಇಚ್ಛಾ ಹೇಳಿಕೆ ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-4, 4(ಎ), 5, 5(ಎ) ಎಂದು ಗುರುತಿಸಲಾಯಿತು. ನಿಪಿ-4ರಲ್ಲಿರುವ 1ನೇ ಆರೋಪಿಯ ಎಡಗೈ ಹೆಬ್ಬೆಟ್ಟಿನ ಗುರುತು ಹಾಗೂ ನಿಪಿ-5ರಲ್ಲಿರುವ 2ನೇ ಆರೋಪಿಯ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-4(ಬಿ), 5(ಬಿ) ಎಂದು ಗುರುತಿಸಲಾಯಿತು. ನಂತರ 1 ಮತ್ತು 2ನೇ ಆರೋಪಿತರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುತ್ತೇನೆ. ನಂತರ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-7ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಶ್ರೀ ಎಬಿಎಸ್, 1 ಮತ್ತು 2ನೇ ಆರೋಪಿತರ ಪರ ವಕೀಲರಿಂದ**

ಚಾಸಾ-1ರವರು 1 ಮತ್ತು 2ನೇ ಆರೋಪಿತರನ್ನು ದಸ್ತಗಿರಿ ಮಾಡಿ ಮಧ್ಯಾಹ್ನ 3-00 ಗಂಟೆಗೆ ನನ್ನ ಸಮಕ್ಷಮ ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. 1 ಮತ್ತು 2ನೇ ಆರೋಪಿತರು ನಿಪಿ-4 ಮತ್ತು 5ರಂತೆ ನನ್ನ ಸಮಕ್ಷಮ ಸ್ವಇಚ್ಛಾ ಹೇಳಿಕೆಗಳನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಈ ಪ್ರಕರಣದಲ್ಲಿ ಯಾವುದೇ ತನಿಖೆಯನ್ನು ಕೈಗೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಮ್ಮ ಇಲಾಖೆಯ ಮೇಲಾಧಿಕಾರಿಗಳ ಮಾತು ಕೇಳಿಕೊಂಡು ಆರೋಪಿತರ ವಿರುದ್ಧ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ - ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ. ಎಂದು ಸಾಕ್ಷಿ ಒಪ್ಪಿರುತ್ತಾರೆ.

**(ಕುಮಾರ್ ಹೆಚ್.ಎನ್)**
2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕನಕಪುರ, ಬೆಂಗಳೂರು ದಕ್ಷಿಣ ಜಿಲ್ಲೆ.